ಮೈಸೂರ ಗೆಜೆಟ್ಟ

ಸರ್ಕಾರದಿಂದ ಘಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಜೂನ್ ತಾ|| 20, ಸನ್ 1885.

ಟಿಪ್ಪಣಿ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇಡುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ನಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್‌ರು ವಗೈರೆರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜುಡಿಷಿಯಲ್ ಇಲಾಖಾ.

ಮೈಸೂರು ಚೀಫ್ ಕೋರ್ಟ್‌ನಲ್ಲಿ.

1885ನೇ ಇಸವಿ ಅರ್ಜೀ ನಂಬರ್ 54.

ಮೃತಪಟ್ಟ ಸಿ. ಶ್ರೀನಿವಾಸಯ್ಯಂಗಾರ್ರ ಆಸ್ತಿ ವಿಷಯದಲ್ಲಿ—

ಅರ್ಜೀದಾರ್ ಅಂಮಂಣಿಅಮ್ಮಾಳ್ ಮೃತಪಟ್ಟ ಸದರೀ ಸಿ. ಶ್ರೀನಿವಾಸಯ್ಯಂಗಾರ್ರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇರೆ ಹಾಲಿ ಬೆಂಗಳೂರು ಚಿಕ್ಕಪ್ಯಾಟೇ ಸ್ಥಳದ ಅಂಮಂಣಿಅಮ್ಮಾಳ್, ಚಿದಂಬರಂ ತಾಲ್ಲೂಕು ತಹಶೀಲ್ದಾರರಾಗಿ ಇದ್ದು ವಿಳಪ್ಪುರಂ ತಾಲ್ಲೂಕು ಪಂಚವಾದೇರಿ ಗ್ರಾಮದಲ್ಲಿ ವಾಸಸ್ಥರಾಗಿ ಮೃತಪಟ್ಟ ಸಿ. ಶ್ರೀನಿವಾಸಯ್ಯಂಗಾರ್ರ ಜಿಂದಗಿ ಬಗ್ಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಅಕ್ಟೊ ಮೇರಿಗೆ ಸರಟಿಫಿಕೇಟ್ ಬಗ್ಗೆ ಈ ಕೋರ್ಟ್‌ಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಅಂಮಂಣಿ ಅಮ್ಮಾಳ್‌ಯವರ ಅರ್ಜೀಯನ್ನು 1885ನೇ ಇಸವಿ ಜುಲೈ ತಿಂಗಳು 14ನೇ ತಾರೀಖು ಮಂಗಳವಾರದಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಮೃತಪಟ್ಟ ಸದರೀ ಸಿ. ಶ್ರೀನಿವಾಸಯ್ಯಂಗಾರ್ರ ಆಸ್ತಿಗೆ ಹಕ್ಕುದಾರರಾದ ವಿಸಪ್ಟ್ಯರೂ ಬೆಂಗಳೂರಲ್ಲಿ ಈ ಕೋರ್ಟ್‌ನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1885ನೇ ಇಸವಿ ಜೂನ್ ತಿಂಗಳು 12ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತ ಖತ್ತೊಡನೆ ಕೊಡೋಣಾಗಿಧೆ.

ಎಸ್. ಹೇಮಾಜೀರಾವ್,
ರಿಜಿಸ್ಟ್ರಾರ್.

ಮೈಸೂರು ರೆವಿನ್ಯೂ ಸರ್ವೇ ಮತ್ತು ಸೆಟಿಲ್‌ಮೆಂಟ್ ಇಲಾಖಾ.

ನಂಬರ್ 180. ತಾರೀಖು 1ನೇ ಜೂನ್ 1885.

ಇದರಿಂದ ಸಮಸ್ತ ಜನಗಳಿಗೂ ತಿಳಿಯುವ ಬಗ್ಗೆ ಪ್ರಕಟಿಸಲ್ಪಡುವದೇನಂದರೆ, ಲೇಟ್ ದೇವನಹಳ್ಳಿ ತಾಲ್ಲೂಕಿಗೆ ಸೇರಿದ ಈ ಕೆಳಗೆ ನಮೋದಾಗುವ ಸರಕಾರಿ ಗ್ರಾಮಗಳ ರಿವಿನ್ಯೂ ಸರ್ವೆ ಜಮಾಬಂದಿಯು ಇದೇ ತಿಂಗಳು 25ನೇ ತಾರೀಖಿಗೆ ಯಾ ಆ ಪ್ರಮಾಣಿಗೆ ಪ್ರಾರಂಭಿಸಲ್ಪಡುತ್ತೆ.

36	ಚಿಕ್ಕಬಳ್ಳಾಪುರ ತಾಲ್ಲೂಕಿನ ಗ್ರಾಮಗಳು	
32	ದೊಡ್ಡಬಳ್ಳಾಪುರ	,,
26	ಬೆಂಗಳೂರು	,,
2	ನೆಲಮಂಗಲ	,,

ಜೆ. ಪಿ. ಗ್ರಾಂಟ್, ಸೂಪರ್‌ಟಿಂಡೆಂಟ್, ರೆವಿ|| ಸರ್ವೆ.